ಬೆಳಗಾವಿ ಜಿಲ್ಲೆ ತೋಟಗಾರಿಕೆ ಇಲಾಖೆ ಸರಿಯಾಗಿ ಕೆಲಸ ನಿರ್ವಹಿಸದೇ ಇರುವುದು

1676 - ಶ್ರೀ ಮಹಾಂತೇಶ್ ಎಸ್. ಕೌಜಲಗಿ (ಬೈಲಹೊಂಗಲ) : ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾವಿ ಜಿಲ್ಲೆ ತೋಟಗಾರಿಕೆ ಇಲಾಖೆಯು ಸರಿಯಾಗಿ ಕೆಲಸ ನಿರ್ವಹಿಸದೆ ಇರುವುದರಿಂದ ಜಿಲ್ಲಾ ಪರಿಷತ್ತು ಬೆಳಗಾವಿ ಇವರು ತೋಟಗಾರಿಕೆ ಇಲಾಖೆಗೆ ಆಯವ್ಯಯದಲ್ಲಿ ಒದಗಿಸಿದ ಹಣವನ್ನು ಬೇರೆ ಕೆಲಸಗಳಿಗೆ ಕೊಡುವ ಸಲುವಾಗಿ ಡೈವರ್ಟ್ ಮಾಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರವು ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ?*

ಇ) *ತೋಟಗಾರಿಕೆ ಇಲಾಖೆಯಿಂದ ಬೆಳಗಾವಿ ಜಿಲ್ಲೆಯಲ್ಲಿ ಸಾಕಷ್ಟು ಪ್ರಮಾಣದಲ್ಲಿ ತೆಂಗು, ಮಾವು ಹಾಗೂ ಚಿಕ್ಕು ಮತ್ತಿತರ ಗಿಡಗಳು ರೈತರಿಗೆ ಸಕಾಲದಲ್ಲಿ ಸಿಗದೆ ಇರತಕ್ಕ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಈ) *ಹಾಗಿದ್ದಲ್ಲಿ ರೈತರಿಗೆ ಸರಿಯಾಗಿ ಸರಬರಾಜು ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು?*

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಬೈಲಹೊಂಗಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಯಾರ್ಡ್‌ನಲ್ಲಿ ರೈತರಿಗೆ ಹಾಗೂ ಹಮಾಲರಿಗೆ ವಿಶ್ರಾಂತಿ ಗೃಹ

1677 - ಶ್ರೀ ಮಹಾಂತೇಶ್ ಎಸ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಕೃಷಿ ಉತ್ಪನ್ನ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೈಲಹೊಂಗಲ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಯಾರ್ಡ್‌ನಲ್ಲಿ ಹಮಾಲರಿಗೆ ಹಾಗೂ ರೈತರಿಗೆ ವಿಶ್ರಾಂತಿ ಗೃಹ ಕಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

ಅ) ಹಮಾಲರಿಗೆ ವಿಶ್ರಾಂತಿ ಗೃಹ ಅಂದರೆ ಶ್ರಮಿಕ ಭವನ ನಿರ್ಮಿಸಲು ಟೆಂಡರ್ ಕರೆಯಲಾಗಿದ್ದು ಟೆಂಡರ್ ಮಂಜೂರಾದ ಕೂಡಲೇ ಕಾಮಗಾರಿ ಕಾರ್ಯಕ್ಕೆ ಆದೇಶ ನೀಡಲಾಗುವುದು.

ಈಗಾಗಲೇ ಬೈಲಹೊಂಗಲ ಮಾರುಕಟ್ಟೆ ಪ್ರಾಂಗಣದಲ್ಲಿ ರೈತಭವನವಿರುವುದರಿಂದ, ರೈತರಿಗೆ ವಿಶ್ರಾಂತಿ ಗೃಹ ನಿರ್ಮಿಸುವ ಯಾವುದೇ ಯೋಜನೆ ಇರುವುದಿಲ್ಲ.

ಕೃಷಿ ಇಲಾಖೆಯ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ

1680 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1994-95ರಿಂದ1998ರ ಮಾರ್ಚ್ ಅವಧಿಯಲ್ಲಿ ಕೃಷಿ ಇಲಾಖೆಯ ಎಷ್ಟು ಅಧಿಕಾರಿಗಳು ಶಿಸ್ತಿನ ಕ್ರಮಕ್ಕೆ ಒಳಗಾಗಿದ್ದಾರೆ?*

ಆ) *ಅಮಾನತ್ತಿನಲ್ಲಿಡಲಾದ ಅಧಿಕಾರಿಗಳ ಸಂಖ್ಯೆ ಎಷ್ಟು?*

ಇ) *ಎಷ್ಟು ಜನ ಸಿಬ್ಬಂದಿ ವಿರುದ್ಧ ಇಲಾಖಾ ತನಿಖೆ ನಡೆದಿದೆ?*

ಈ) *ಎಷ್ಟು ಜನ ಸಿಬ್ಬಂದಿಯನ್ನು ಕೆಲಸದಿಂದ ವಜಾ ಮಾಡಲಾಗಿದೆ?*

ಶ್ರೀ ಸಿ. ಬೈರೇಗೌಡ (ಕೃಷಿ ಸಚಿವರು) :

ಅ) 582

ಆ) 219

ಇ) 258

ಈ) 25

ಕುಂದಾಪುರ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣ.

1682 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಕುಂದಾಪುರ ತಾಲ್ಲುಕು ಕೇಂದ್ರದಲ್ಲಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಕ್ಕಾಗಿ ಸ್ಥಳ ಕಾದಿರಿಸಲಾಗಿದೆಯೇ? ಹಾಗಿದ್ದಲ್ಲಿ ಎಲ್ಲಿ ಮತ್ತು ಎಷ್ಟು ಎಕರೆ ಸ್ಥಳವನ್ನು ಕಾದಿರಿಸಲಾಗಿದೆ?*

2. *ಈ ಕಾಮಗಾರಿ ಯಾವಾಗ ಪ್ರಾರಂಭವಾಗುವುದು ಹಾಗೂ ಯಾವಾಗ ಪೂರ್ಣಗೊಳ್ಳುವುದು?*

3. *ಕುಂದಾಪುರ ಬಸ್ ಡಿಪೋ ಲಾಭದಾಯಕವಾಗಿ ನಡೆಯುತ್ತಿದ್ದರೂ ಬಸ್ ನಿಲ್ದಾಣ ನಿರ್ಮಿಸುವಲ್ಲಿ ವಿಳಂಬವಾಗಲು ಕಾರಣವೇನು?*